ಆ) ಗುಲ್ಬರ್ಗದ ಅಶೋಕ ಜನಾರ್ಧನ್ ರಾವ್ ಇವರು ತಾವು ಸಾವದಿಗಿಯಲ್ಲಿ (3000) ಮೂರು ಸಾವಿರ ತಗ್ಗುಗಳನ್ನು ತೋಡಿದ್ದು ಇದಕ್ಕೆ ಹಣವನ್ನು ಪಾವತಿ ಮಾಡಿಲ್ಲವೆಂದು ಮಾನ್ಯ ವಿಧಾನ ಪರಿಷತ್ ಸಭಾಪತಿಗಳಿಗೆ ದೂರು ನೀಡಿದ್ದು ಈ ಬಗ್ಗೆ ಮಾನ್ಯ ಸಭಾಪತಿಗಳಿಗೆ ಆಪಾದನೆಯು ಸತ್ಯಕ್ಕೆ ದೂರವಾಗಿರುತ್ತದೆ ಎಂದು ಉಪ ಆರಣ್ಯ ಸಂರಕ್ಷಣಾಧಿಕಾರಿ, ಗುಲ್ಬರ್ಗ (ಪ್ರಾದೇಶಿಕ ಆರಣ್ಯ ವಿಭಾಗ) ಇವರು ವಿವರವಾದ ವರದಿಯನ್ನು ಸಲ್ಲಿಸಿರುತ್ತಾ.

ವಿಷಯ:- ಉತ್ತರ ಕನ್ನಡ ಜಿಲ್ಲೆಯ ಕಾಲೇಜುಗಳಲ್ಲಿ ಸ್ನಾತಕೋತ್ತರ ಶಿಕ್ಷಣ ಪ್ರಾರಂಭ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 267(497)

ಡಾ: ಯು.ಚಿತ್ತರಂಜನ್ (ಭಟ್ಕಳ):- ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಅನೇಕ ಕಾಲೇಜುಗಳಲ್ಲಿ ಉತ್ತಮ ಸೌಲಭ್ಯವಿದ್ದರೂ ಕೂಡ ವಿಜ್ಞಾನ, ಕಲೆ ಮತ್ತು ವಾಣಿಜ್ಯ ವಿಭಾಗದಲ್ಲಿ ಸ್ನಾತಕೋತ್ತರ ಶಿಕ್ಷಣ ನೀಡುವ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ಡಿ.ಮಂಜುನಾಥ್ (ಉನ್ನತ ಶಿಕ್ಷಣ ಸಚಿವರು) :-

ಅ) ಸಂಯೋಜಿತವಾಗಿರುವ ವಿಜ್ಞಾನ, ಕಲಾ ಮತ್ತು ವಾಣಿಜ್ಯ ಕಾಲೇಜುಗಳಲ್ಲಿ ಸ್ನಾತಕೋತ್ತರ ಕೋರ್ಸನ್ನು ಪ್ರಾರಂಭಿಸಲು ಕರ್ನಾಟಕ ವಿಶ್ವವಿದ್ಯಾಲಯವು ತನ್ನ ಧೋರಣೆಯಂತೆ ಅನುಮತಿಸುತ್ತಿಲ್ಲ.

ಆ) ಉದ್ಭವಿಸುವುದಿಲ್ಲ.

ವಿಷಯ:- ವಿಜಾಪುರ ಜಿಲ್ಲೆಯಲ್ಲಿ ಮಾನ್ಯತೆ ಪಡೆದ ಮಾಧ್ಯಮಿಕ ಶಾಲೆಗಳ ಸಂಖ್ಯೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 268(661)

ಶ್ರೀ ಜೆ.ಟಿ.ಪಾಟೀಲ್(ಬೀಳಗಿ) :- ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಜಿಲ್ಲಾ ಪರಿಷತ್ ಅಸ್ತಿತ್ವಕ್ಕೆ ಬಂದ ನಂತರ ಬಿಜಾಪುರ ಜಿಲ್ಲೆಯಲ್ಲಿ ಮಾನ್ಯತೆ ಪಡೆದ ಮಾಧ್ಯಮಿಕ ಶಾಲೆಗಳೆಷ್ಟು?

ಆ) ಅಂತಹ ಶಾಲೆಗಳಿಗೆ ಸರ್ಕಾರ ಮಾನ್ಯತೆ ನೀಡಿ ಅನುದಾನ ಬಿಡುಗಡೆ ಮಾಡಿದೆಯೇ?

ಇ) ಅಂತಹ ಶಾಲೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಸರ್ಕಾರ ಅನುದಾನ ನೀಡಿದೆಯೇ ಹಾಗೂ ಅವರಿಗೆ ವೇತನ ಬಿಡುಗಡೆ ಮಾಡಿದೆಯೇ? ಇಲ್ಲವಾದಲ್ಲಿ ಜಿಲ್ಲಾ ಪರಿಷತ್ ಮಾನ್ಯತೆ ಪಡೆದಿರುವ ಈ ಶಾಲೆಗಳಿಗೆ ಹಾಗೂ ಸಿಬ್ಬಂದಿ ಸಲುವಾಗಿ ಸರ್ಕಾರದ ಮುಂದಿನ ಕ್ರಮವೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ(ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):-

ಅ) ಜಿಲ್ಲಾ ಪರಿಷತ್ 27 ಶಾಲೆಗಳಿಗೆ ಮಂಜೂರಾತಿ ನೀಡಿದೆ. ಅದರಲ್ಲಿ ಮಾನ್ಯತೆ ಪಡೆದ ಶಾಲೆಗಳ ಸಂಖ್ಯೆ 4 ಮಾತ್ರ.

ಆ) -- ಇಲ್ಲ --

ಇ) ಶಾಶ್ವತ ಅನುದಾನ ರಹಿತವಾಗಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡಿರುವುದರಿಂದ ಸಿಬ್ಬಂದಿಗಳಿಗೆ ಅನುದಾನ ಹಾಗೂ ವೇತನ ನೀಡುವ ಪ್ರಶ್ನೆ ಉದ್ಭವಿಸುವುದಿಲ್ಲ.

ವಿಷಯ:- ಬೆಂಗಳೂರಿನ ಚಿತ್ರಕಲಾ ಪರಿಷತ್ತಿಗೆ ನೆರವು.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 269(69)